## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮೀಣ ಮತ್ತು ನಗರ ಪ್ರದೇಶದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದ ವಸತಿ ರಹಿತರಿಗೆ ವಸತಿಯನ್ನು ಕಲ್ಪಿಸುವ ಸಲುವಾಗಿ ನೂತನವಾಗಿ "ಡಾ|| ಬಿ.ಆರ್. ಅಂಬೇಡ್ಕರ್ ನಿವಾಸ" ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ:

1. 2015-16ನೇ ಆಯವ್ಯಯದ ಭಾಷಣದ ಸಮಾಜ ಕಲ್ಯಾಣ ಇಲಾಖೆಯ ಕಂಡಿಕೆ-188ರಲ್ಲಿನ ಘೋಷಣೆ.
2. ಜಾಗೃತಿ ಸಮಿತಿಯ ರಚನೆಯ ಆದೇಶ ಸಂಖ್ಯೆ:ವಇ 67 ಹೆಚ್‌ಎಹೆಚ್ 2015, ಬೆಂಗಳೂರು, ದಿನಾಂಕ:16.11.2015.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ 2015-16ನೇ ಸಾಲಿನ ಆಯವ್ಯಯದ ಭಾಷಣದ ಸಮಾಜ ಕಲ್ಯಾಣ ಇಲಾಖೆಯ ಕಂಡಿಕೆ-188ರಲ್ಲಿ ಈ ಕೆಳಕಂಡಂತೆ ಘೋಷಣೆ ಮಾಡಿರುತ್ತಾರೆ.

> "ನಿವೇಶನ ಹೊಂದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವಸತಿ ರಹಿತ ಬಡ ಕುಟುಂಬಗಳಿಗೆ – ಗ್ರಾಮೀಣ ಪ್ರದೇಶಗಳಲ್ಲಿ 1,00,000 ಮನೆಗಳನ್ನು ಪ್ರತಿ ಮನೆಯ ಘಟಕ ವೆಚ್ಚ 1.50 ರೂ ಲಕ್ಷಗಳಲ್ಲಿ ಹಾಗೂ ನಗರ ಪ್ರದೇಶಗಳಲ್ಲಿ 50,000ಗಳನ್ನು ಪ್ರತಿ ಮನೆ ಘಟಕ ವೆಚ್ಚ ರೂ.1.80 ಲಕ್ಷ ರೂ.ಗಳ ವೆಚ್ಚದಲ್ಲಿ ವಸತಿ ಇಲಾಖೆಯ ಮುಖಾಂತರ ನಿರ್ಮಿಸಲಾಗುವುದು. ಮನೆಗಳ ನಿರ್ಮಾಣದ ಪೂರ್ಣ ವೆಚ್ಚವನ್ನು ಸರ್ಕಾರವೇ ಭರಿಸುತ್ತದೆ."

ಅದರಂತೆ "ಡಾ|| ಬಿ.ಆರ್.ಅಂಬೇಡ್ಕರ್ ನಿವಾಸ" ಯೋಜನೆಯನ್ನು ಅನುಷ್ಠಾನಗೊಳಿಸಲು ಈ ಯೋಜನೆಯಡಿ ಗ್ರಾಮೀಣ ಪ್ರದೇಶಕ್ಕೆ ನಿಗದಿಪಡಿಸಲಾದ 1,00,000 ಮನೆಗಳಿಗೆ ಪ್ರತಿ ಮನೆ ಘಟಕ ವೆಚ್ಚ ರೂ.1.50 ಲಕ್ಷಗಳು ಮತ್ತು ನಗರ ಪ್ರದೇಶಕ್ಕೆ ನಿಗದಿಪಡಿಸಲಾದ 50,000 ಮನೆಗಳಿಗೆ ಪ್ರತಿ ಮನೆ ಘಟಕ ವೆಚ್ಚ ರೂ.1.80 ಲಕ್ಷಗಳ ಸರ್ಕಾರದ ಸಹಾಯಧನವನ್ನು ನೀಡಲಾಗುವುದು. "ಡಾ.ಬಿ.ಆರ್.ಅಂಬೇಡ್ಕರ್ ನಿವಾಸ" ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಫಲಾನುಭವಿಗಳ ಆಯ್ಕೆಯ ಬಗ್ಗೆ ಈಗಾಗಲೇ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಹೊರಡಿಸಲಾದ ಜಾಗೃತಿ ಸಮಿತಿಯನ್ನು ಹಿಂಪಡೆದು(ವಸತಿ ಯೋಜನೆಗೆ ಮಾತ್ರ) ವಸತಿ ಇಲಾಖೆಯಿಂದಲೇ ಮೇಲೆ ಓದಲಾದ ಕ್ರಮಾಂಕ(2)ರಂತೆ ಜಾಗೃತಿ ಸಮಿತಿಯನ್ನು ರಚಿಸಲಾಗಿದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಸವಿವರವಾದ ಮಾರ್ಗಸೂಚಿ ಸಿದ್ಧಪಡಿಸಿ, ಗ್ರಾಮೀಣ ಮತ್ತು ನಗರ ಪ್ರದೇಶದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಸತಿ ರಹಿತರಿಗೆ ವಸತಿಯನ್ನು ಕಲ್ಪಿಸುವ ಸಲುವಾಗಿ ನೂತನವಾಗಿ "ಡಾ|| ಬಿ.ಆರ್. ಅಂಬೇಡ್ಕರ್ ನಿವಾಸ" ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶ ಹೊರಡಿಸಲು ತೀರ್ಮಾನಿಸಲಾಗಿದೆ.

### ಸರ್ಕಾರದ ಆದೇಶ ಸಂಖ್ಯೆ:ವಇ 67 ಹೆಚ್‌ಎಹೆಚ್ 2015, ಬೆಂಗಳೂರು, ದಿನಾಂಕ:16.11.2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಸತಿ ರಹಿತರಿಗೆ ವಸತಿಯನ್ನು ಕಲ್ಪಿಸುವ ಸಲುವಾಗಿ ನೂತನವಾಗಿ "ಡಾ|| ಬಿ.ಆರ್.ಅಂಬೇಡ್ಕರ್ ನಿವಾಸ" ಯೋಜನೆಯನ್ನು ಅನುಷ್ಠಾನಗೊಳಿಸಲು ಈ ಯೋಜನೆಯಡಿ ಗ್ರಾಮೀಣ ಪ್ರದೇಶಕ್ಕೆ ನಿಗದಿಪಡಿಸಲಾದ 1,00,000 ಮನೆಗಳಿಗೆ ಪ್ರತಿ ಮನೆ ಘಟಕ ವೆಚ್ಚ ರೂ.1.50 ಲಕ್ಷಗಳು ಮತ್ತು ನಗರ ಪ್ರದೇಶಕ್ಕೆ ನಿಗದಿಪಡಿಸಲಾದ 50,000 ಮನೆಗಳಿಗೆ ಪ್ರತಿ ಮನೆ ಘಟಕ ವೆಚ್ಚ ರೂ.1.80 ಲಕ್ಷಗಳ ಸರ್ಕಾರದ ಸ[illegible]ವನ್ನು ನೀಡಲಾಗುವುದು. ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಗ್ರಾಮೀಣ ಪ್ರದೇಶದ 1,0[illegible] ನಿರ್ಮಾಣಕ್ಕಾಗಿ ರೂ.1500 ಕೋಟಿಗಳನ್ನು ಮತ್ತು ನಗರ ಪ್ರದೇಶದ 50,000 ಮನೆಗಳ ನಿರ್ಮಾ[illegible] ಕೋಟಿಗಳನ್ನು ಹೀಗೆ ಒಟ್ಟು ರೂ.2400 ಕೋಟಿಗಳು ಅನುದಾನವನ್ನು ಪ್ರಸ್ತುತ ಮತ್ತು ಮುಂದಿನ [illegible] ಆಯವ್ಯಯದಲ್ಲಿ (2015-16, 2016-17 ಮತ್ತು 2017-18) ಒದಗಿಸಲಾಗುವುದು.

2015-16ನೇ ಆರ್ಥಿಕ ವರ್ಷದಲ್ಲಿ ಬಸವ ವಸತಿ ಯೋಜನೆ ಲೆಕ್ಕ ಶೀರ್ಷಿಕೆ 2216-03-104-0-01 ರಡಿ ಪರಿಶಿಷ್ಟ ಜಾತಿ ಉಪಯೋಜನೆ ಅಬ್ಜೆಕ್ಟ್ ಕೋಡ್ 422 ರೂ. 981.75 ಕೋಟಿ ಮತ್ತು ಪರಿಶಿಷ್ಟ ಪಂಗಡದ ಉಪಯೋಜನೆಯಡಿ ಅಬ್ಜೆಕ್ಟ್ ಕೋಡ್ 423 ರಲ್ಲಿ ರೂ. 545.30 ಕೋಟಿಗಳನ್ನು ಒದಗಿಸಿದ್ದು, ಈ ಅನುದಾನವನ್ನು ಅಬ್ಜೆಕ್ಟ್ ಕೋಡ್ 422ರಡಿ ರೂ.300.00 ಕೋಟಿಗಳನ್ನು ಮತ್ತು ಅಬ್ಜೆಕ್ಟ್ ಕೋಡ್ 423 ರಡಿ ರೂ.150.00 ಕೋಟಿಗಳನ್ನು ಹೀಗೆ ಒಟ್ಟು ರೂ.450.00 ಕೋಟಿಗಳನ್ನು 2216-03-104-0-03 ಲೆಕ್ಕ ಶೀರ್ಷಿಕೆಯಡಿ ಒದಗಿಸಲಾಗಿದೆ.

ಸಾಮಾಜಿಕ ಹಾಗೂ ಆರ್ಥಿಕ ಜಾತಿ ಜನಗಣತಿ-2011ರ ಸಮೀಕ್ಷೆಯ ವರದಿ ಈಗಾಗಲೇ ಬಿಡುಗಡೆಯಾಗಿದ್ದು, ಈ ಸಮೀಕ್ಷೆಯ ವರದಿಯಲ್ಲಿನ ಅಂಕಿ-ಅಂಶಗಳ ಮತ್ತು ಮಾಹಿತಿಯ ಆಧಾರದ ಮೇಲೆ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕಚ್ಚಾ ಮನೆಗಳನ್ನು ಹೊಂದಿರುವ, ಅರ್ಹ ವಸತಿ ರಹಿತರನ್ನು ಗುರುತಿಸಿ, ವಿವಿಧ ವಸತಿ ಯೋಜನೆಯ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಲುವಾಗಿ ಜಾಗೃತಿ ಸಮಿತಿಯನ್ನು ರಚಿಸಲಾಗಿದೆ. ಸರ್ಕಾರದಿಂದ ನಿಗದಿಪಡಿಸಲಾದ ಗುರಿಗೆ ತಕ್ಕಂತೆ ಕಾಮಗಾರಿ ಆದೇಶ ನೀಡುವುದು, ಫಲಾನುಭವಿಗಳಿಂದ ಮನೆ ನಿರ್ಮಾಣ, ದಾಖಲೀಕರಣ, ಬ್ಯಾಂಕ್ ಖಾತೆ ತೆರೆಯುವುದು, ಅನುದಾನ ಬಿಡುಗಡೆ ಇತ್ಯಾದಿ ಎಲ್ಲಾ ಪ್ರಕ್ರಿಯೆಗಳನ್ನು ವಸತಿ ಇಲಾಖೆಯಿಂದ ಹೊರಡಿಸಲಾದ 'ಮನೆ' ಎಂಬ ಸಮಗ್ರ ಮಾರ್ಗಸೂಚಿಯಲ್ಲಿ ನೀಡಿರುವ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ತಿಳಿಸಿದೆ. ಹಾಗೂ ಈ ಯೋಜನೆಗೆ ಸರ್ಕಾರದ ಹೊಸ ಮಾರ್ಗಸೂಚಿಯ ದಿನಾಂಕ:16.11.2015ರಲ್ಲಿ ಹೊರಡಿಸಲಾಗಿದೆ.

ಈ ಆದೇಶದೊಂದಿಗಿನ ಅನುಬಂಧದಲ್ಲಿ ನೀಡಿರುವ ಸರ್ಕಾರದ ಮಾರ್ಗಸೂಚಿಗಳು ಪ್ರಸ್ತುತ ವರ್ಷದಲ್ಲಿ ಡಾ। ಬಿ.ಆರ್. ಅಂಬೇಡ್ಕರ್ ನಿವಾಸ ಯೋಜನೆಗೆ ಮಾತ್ರ ಅನ್ವಯಿಸುತ್ತದೆ. ರಾಜ್ಯ ಸರ್ಕಾರದ ಉಳಿದ ವಸತಿ ಯೋಜನೆಗಳಿಗೆ ಮುಂದಿನ ಸಾಲಿನಿಂದ ಅನ್ವಯಿಸುತ್ತದೆ. ಈ ಯೋಜನೆ ಅನುಷ್ಠಾನಕ್ಕೆ ಬೇಕಾಗುವ ಬದಲಾವಣೆಗಳನ್ನು ಅಳವಡಿಸಲು ವಸತಿ ಇಲಾಖೆಯಿಂದ ಕಾಲ ಕಾಲಕ್ಕೆ ಆದೇಶ ಹೊರಡಿಸಲಾಗುತ್ತದೆ.

ಈ ಮೇಲ್ಕಂಡ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ವಸತಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳುವಂತೆ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 497 ವೆಚ್ಚ-9/2015 ದಿನಾಂಕ:16.11.2015ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಸಮೀರ್ ಮಡಿಮನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ವಸತಿ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
5. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ.
6. ಸರ್ಕಾರದ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ(ಮರುಸಭೆಗಳು ಮತ್ತು ಪೌರಾಡಳಿತ) ನಗರಾಭಿವೃದ್ಧಿ ಇಲಾಖೆ. ವಿಕಾಸ ಸೌಧ.
8. ಸರ್ಕಾರದ ವಿಶೇಷ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ.
9. ಸರ್ಕಾರದ ಅಪರ ಕಾರ್ಯದರ್ಶಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ.
10. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ.

11. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ, ಬೆಂಗಳೂರು.
12. ಸಮಾಲೋಚಕರು, ಸಮಾಜ ಕಲ್ಯಾಣ ಇಲಾಖೆ.
13. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ

| | |
|---|---|
| 14. ಎಲ್ಲಾ ಜಿಲ್ಲಾಧಿಕಾರಿಗಳು.<br>15. ಎಲ್ಲಾ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.<br>16. ಎಲ್ಲಾ ಉಪ ವಿಭಾಗಾಧಿಕಾರಿಗಳು.<br>17. ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು.<br>18. ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್‌ರವರು,<br>19. ಎಲ್ಲಾ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯ್ತಿ,<br>20. ಎಲ್ಲಾ ನಗರಸಭೆ ಆಯುಕ್ತರು.<br>21. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿ. | ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಮುಖಾಂತರ |

ಪ್ರತಿ ಮಾಹಿತಿಗಾಗಿ:

1. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಕಾನೂನು ನ್ಯಾಯ, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
4. ಮಾನ್ಯ ವಸತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.
6. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ. ಬೆಂಗಳೂರು.
7. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ) ಪ್ರಕರಣ ಸಂಖ್ಯೆ: ಸಿ:419/2015, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕ, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
11. ಶಾಖಾ ರಕ್ಷಾ ಕಡತಕ್ಕೆ.

3

**ಸರ್ಕಾರದ ಆದೇಶ ಸಂಖ್ಯೆ:ವಇ 67 ಹೆಚ್‌ಎಹೆಚ್ 2015, ಬೆಂಗಳೂರು ದಿನಾಂಕ:16.11.2015ಕ್ಕೆ ಅನುಬಂಧ.**

## ವಸತಿ ಇಲಾಖೆಯ ಮುಖಾಂತರ ವಿವಿಧ ವಸತಿ ಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಗ್ರಾಮೀಣ ವಸತಿ ಯೋಜನೆಗಳ ಮಾರ್ಗಸೂಚಿ.

ವಿಷಯ: ವಸತಿ ಇಲಾಖೆಯ ಮುಖಾಂತರ ವಿವಿಧ ವಸತಿ ಯೋಜನೆಗಳಡಿ ನಿರ್ಮಿಸಲಾಗುವ ಮನೆಗಳನ್ನು ಹಂಚಿಕೆ ಮಾಡುವ ಸಂಬಂಧ ಫಲಾನುಭವಿಗಳ ಆಯ್ಕೆ ಕುರಿತು ಮಾರ್ಗಸೂಚಿಯನ್ನು ಹೊರಡಿಸುವ ಬಗ್ಗೆ.

ವಸತಿ ಇಲಾಖೆಯ ಮುಖಾಂತರ ವಿವಿಧ ವಸತಿ ಯೋಜನೆಗಳಡಿ ಫಲಾನುಭವಿಗಳನ್ನು ಆಯ್ಕೆ ಮಾಡುವಲ್ಲಿ ಆಗುತ್ತಿರುವ ವಿಳಂಬ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಲು ಈ ಕೆಳಗಿಂತೆ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ.

ಸಾಮಾಜಿಕ ಹಾಗೂ ಆರ್ಥಿಕ ಜಾತಿ ಜನಗಣತಿ-2011ರ ಮಾಹಿತಿ ಸಂಗ್ರಹಣೆ, ಗ್ರಾಮ ಪಂಚಾಯ್ತಿಗಳಿಗೆ ರವಾನೆ ಮಾಡಿ, ಗ್ರಾಮ ಪಂಚಾಯ್ತಿಗಳಿಂದ ಅರ್ಹತೆ ಬಗ್ಗೆ ಪರಿಶೀಲಿಸಿ, ಫಲಾನುಭವಿಗಳ ಆಯ್ಕೆ, ಮೀಸಲಾತಿ, ಆದ್ಯತೆ ಹಾಗೂ ಈಗಾಗಲೇ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಹೊರಡಿಸಲಾದ ಜಾಗೃತಿ ಸಮಿತಿಯನ್ನು ಹಿಂಪಡೆದು ವಸತಿ ಇಲಾಖೆಯಿಂದಲೇ ವಸತಿ ಯೋಜನೆಗಾಗಿ ಜಾಗೃತ ಸಮಿತಿಯನ್ನು ರಚಿಸಿ ಸಮಿತಿಯ ಜವಾಬ್ದಾರಿಗಳ ಬಗ್ಗೆ ತಿಳಿಸಲಾಗಿದ್ದು, ಜೊತೆಗೆ ಈ ಕೆಳಗಿನ ಅಂಶಗಳನ್ನು ಅಳವಡಿಸಿಕೊಳ್ಳಲು ತಿಳಿಸಲಾಗಿದೆ.

1. ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಿಂದ ಸಾಮಾಜಿಕ ಮತ್ತು ಆರ್ಥಿಕ ಜನಗಣತಿ-2011ರ ಸಮೀಕ್ಷೆಯ ವಸತಿರಹಿತರ ಮಾಹಿತಿಯನ್ನು ಪಡೆದು ಎಲ್ಲಾ ವಸತಿ ಯೋಜನೆಗಳಡಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲು ಮೂಲವಾಗಿ ಉಪಯೋಗಿಸುವುದು.

2. ಸಾಮಾಜಿಕ ಹಾಗೂ ಆರ್ಥಿಕ ಜಾತಿ ಜನಗಣತಿ-2011ರ ಸಮೀಕ್ಷೆ (S.E.C.C.)ಯಲ್ಲಿ ಈಗಾಗಲೇ ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಪಂಚಾಯ್ತಿವಾರು ಹಾಗೂ ನಗರ ಪ್ರದೇಶದಲ್ಲಿ ನಗರ ಸ್ಥಳೀಯ ಸಂಸ್ಥೆವಾರು ವಸತಿರಹಿತರ, ಸೂಕ್ತವಲ್ಲದ ವಸತಿ ವ್ಯವಸ್ಥೆ ಹೊಂದಿದವರ ಮಾಹಿತಿಯನ್ನು ಸಂಗ್ರಹಿಸಲಾಗಿದ್ದು, ಸದರಿ ಸಂಪೂರ್ಣ ಮಾಹಿತಿಯನ್ನು ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

3. ಸಾಮಾಜಿಕ ಹಾಗೂ ಆರ್ಥಿಕ ಜಾತಿ ಜನಗಣತಿ-2011ರ ಸಮೀಕ್ಷೆ (S.E.C.C.)ಯಲ್ಲಿ ಸಂಗ್ರಹಿಸಿರುವ ವಸತಿ ರಹಿತರ ಫಲಾನುಭವಿವಾರು ಮಾಹಿತಿಯನ್ನು ಜಿಲ್ಲಾವಾರು, ತಾಲ್ಲೂಕುವಾರು ಹಾಗೂ ಗ್ರಾಮ ಪಂಚಾಯ್ತಿವಾರು ವಿಭಾಗಿಸಿ ಸಿ.ಡಿ ಮೂಲಕ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದಿಂದ ನೀಡುವುದು.

4. ಹೀಗೆ ನೀಡಲಾದ ಮಾಹಿತಿಯನ್ನು ನಗರ ಪ್ರದೇಶಗಳಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಸಂಬಂಧಪಟ್ಟ ಗ್ರಾಮ ಪಂಚಾಯ್ತಿ/ನಗರ ಸ್ಥಳೀಯ ಸಂಸ್ಥೆಗಳಿಗೆ ರವಾನಿಸುವುದು. ಸದರಿ ಮಾಹಿತಿಯನ್ನು ಆಯಾ ಗ್ರಾಮ ಪಂಚಾಯತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ತಮ್ಮಲ್ಲಿ ಲಭ್ಯವಿರುವ ಹಾರ್ಡ್ ಕಾಪಿಯೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವುದು.

5. ಸದರಿ ಮಾಹಿತಿಯನ್ನು ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮ ಪಂಚಾಯತಿಗಳು ಹಾಗೂ ನಗರ ಪ್ರದೇಶಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳು ಸಮೀಕ್ಷೆಯಲ್ಲಿ ಗುರುತಿಸಲಾದ ಎಲ್ಲಾ ವಸತಿರಹಿತರು ವಸತಿ ಯೋಜನೆಗಳ ಮಾರ್ಗಸೂಚಿಗಳಂತೆ ಅರ್ಹರಿರುವ ಬಗ್ಗೆ ಪರಿಶೀಲಿಸುವುದು.

6. ವಿವಿಧ ವಸತಿ ಯೋಜನೆಗಳಡಿ ವಸತಿ ಸೌಲಭ್ಯ ಪಡೆಯಲು ಅರ್ಜಿದಾರರು ಈ ಕೆಳಕಂಡ ಅರ್ಹತೆಯನ್ನು ಹೊಂದಿರಬೇಕು.

- ಅರ್ಜಿದಾರರ ಕುಟುಂಬವು ವಸತಿರಹಿತರಿದ್ದು ಸಾರ್ವಜನಿಕ ಸ್ಥಳಗಳಲ್ಲಿ ವಾಸಿಸುತ್ತಿರುವವರು, ಗುಡಿಸಲು ವಾಸಿಗಳು, ತಾತ್ಕಾಲಿಕ ಶೆಡ್, ಶಿಥಿಲಗೊಂಡ ಮನೆ ಅಥವಾ ಕಚ್ಚಾ ಮನೆಗಳಲ್ಲಿ ವಾಸಿಸುತ್ತಿದ್ದು, 300 ಸ್ಕ್ವೇರ್ ಫೀಟ್ ಹೆಚ್ಚಿಗೆ ಇಲ್ಲದಂತೆ ಒಂದು ಕೋಣೆಯಿಲ್ಲದ 4ಕ್ಕಿಂತ ಹೆಚ್ಚು ಸದಸ್ಯರಿರುವ ಕುಟುಂಬಗಳು, ಅರ್ಜಿದಾರರು ಅಥವಾ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಿ ಕರ್ನಾಟಕದ ಯಾವುದೇ ಭಾಗದಲ್ಲಿ ಸ್ವಂತ ಮನೆಯನ್ನು ಹೊಂದಿರಬಾರದು.

- ಅರ್ಜಿದಾರರ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶದಲ್ಲಿ ರೂ.32000ಗಳಿಗಿಂತ ಕಡಿಮೆ ಹಾಗೂ ನಗರ ಪ್ರದೇಶಗಳಲ್ಲಿ ರೂ.87600ಗಳಿಗಿಂತ ಕಡಿಮೆ ಇರಬೇಕು.

- ಅರ್ಜಿದಾರರು ಮಹಿಳಾ ಫಲಾನುಭವಿಗಳಾಗಿರಬೇಕು. ಆದರೆ ಮಾಜಿ ಯೋಧರು, ವಿಧುರರು, ಅಂಗವಿಕಲರು ಮತ್ತು ಹಿರಿಯ ನಾಗರಿಕರಾಗಿದ್ದಲ್ಲಿ ಪುರುಷರೂ ಸಹ ಅರ್ಹರಾಗಿರುತ್ತಾರೆ.

- ಅರ್ಜಿದಾರರು ಸ್ವಂತ ನಿವೇಶನ ಹೊಂದಿದ್ದು, ನಿವೇಶನಕ್ಕೆ ಸಂಬಂಧಿಸಿದಂತೆ ಖಾತೆ ಹೊಂದಿರಬೇಕು (ಪಾರಂಪರಿಕ ಅರಣ್ಯ ಹಕ್ಕುಗಳ ಕಾಯ್ದೆಯನ್ವಯ ಜಿಲ್ಲಾ ಸಮಿತಿಯಿಂದ ನೀಡಲಾದ ಹಕ್ಕುಪತ್ರ ಪಡೆದಿದ್ದಲ್ಲಿ ವಸತಿ ಸೌಕರ್ಯ ಪಡೆಯಲು ಪರಿಗಣಿಸಬಹುದಾಗಿದೆ.) ಒಂದು ವೇಳೆ ಅರ್ಜಿದಾರರು ಸ್ವಂತ ನಿವೇಶನವನ್ನು ಹೊಂದಿಲ್ಲದೇ ಇದ್ದಲ್ಲಿ ಮೊದಲು ನಿವೇಶನ ಯೋಜನೆಗಳಡಿ ನಿವೇಶನ ನೀಡಿ ನಂತರ ವಸತಿ ಯೋಜನೆಗಳಡಿ ಪರಿಗಣಿಸಲಾಗುವುದು.

- ಬೇರೆ ಯಾವುದೇ ಯೋಜನೆ/ಇಲಾಖೆಯಿಂದ ಈಗಾಗಲೇ ವಸತಿ ಸೌಲಭ್ಯ ಪಡೆದಿರಬಾರದು. ಸದರಿ ಅರ್ಹತೆಯನ್ನು ಪರಿಶೀಲಿಸಿ, ಸಮೀಕ್ಷೆಯಲ್ಲಿ ಗುರುತಿಸಲಾದ ಫಲಾನುಭವಿಗಳು ಅರ್ಹತೆಗಳನ್ನು ಹೊಂದಿರುವ ಬಗ್ಗೆ ದಾಖಲೆಗಳೊಂದಿಗೆ ಪರಿಶೀಲಿಸಿ, ಸ್ಥಳೀಯ ಸಂಸ್ಥೆಗಳು ದಾಖಲೀಕರಣವನ್ನು ನೆರವೇರಿಸುವುದು.

7. ಮೀಸಲಾತಿ: ವಸತಿ ಇಲಾಖೆಯ ಮುಖಾಂತರ ಅನುಷ್ಠಾನಗೊಳಿಸುವ ವಿವಿಧ ವಸತಿ ಯೋಜನೆಯಡಿ ಮೀಸಲಾತಿ ಮತ್ತು ಒಳಮೀಸಲಾತಿ ಈ ಕೆಳಕಂಡಂತಿದೆ:

- ರಾಜ್ಯ ಸರ್ಕಾರದ ಸಾಮಾನ್ಯ ವಸತಿ ಯೋಜನೆಗಳಡಿ:

| ವರ್ಗ | ಶೇಕಡ ಮೀಸಲಾತಿ |
|---|---|
| ಪರಿಶಿಷ್ಟ ಜಾತಿ | 30% |
| ಪರಿಶಿಷ್ಟ ಪಂಗಡ | 10% |
| ಅಲ್ಪ ಸಂಖ್ಯಾತರು | 10% |
| ಸಾಮಾನ್ಯ | 50% |

- ಡಾ|| ಬಿ.ಆರ್.ಅಂಬೇಡ್ಕರ್ ನಿವಾಸ ಯೋಜನೆಯಡಿ:

| ವರ್ಗ | ಶೇಕಡ ಮೀಸಲಾತಿ |
|---|---|
| ಪರಿಶಿಷ್ಟ ಜಾತಿ | 70% |
| ಪರಿಶಿಷ್ಟ ಪಂಗಡ | 30% |

* ಮೇಲಿನ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪ ಸಂಖ್ಯಾತರು ಹಾಗೂ ಸಾಮಾನ್ಯ ವರ್ಗಗಳಲ್ಲಿ ಈ ಕೆಳಕಂಡಂತೆ ಒಳ ಮೀಸಲಾತಿಯನ್ನು ಅಳವಡಿಸಿಕೊಳ್ಳತಕ್ಕದ್ದು.

| ವರ್ಗ | ಶೇಕಡ ಒಳ ಮೀಸಲಾತಿ |
|---|---|
| ಮಾಜಿ ಸೈನಿಕರು | 10% |
| ಅಂಗವಿಕಲರು | 5% |
| ಮಹಿಳೆ | 80% |
| ವಿಶೇಷ ವರ್ಗದ ಗುಂಪುಗಳಾದ ದೇವದಾಸಿ, ವಿಧವೆ, ಲೈಂಗಿಕ ಕಾರ್ಯಕರ್ತೆಯರು ಇತ್ಯಾದಿ. | 5% |

| ಕ್ರ.ಸಂ. | ಆದ್ಯತೆ ವರ್ಗ | ನೀಡಬೇಕಾದ ಆದ್ಯತಾ ಕ್ರಮ ಸಂಖ್ಯೆ |
|---|---|---|
| 1 | ವಸತಿಹೀನರು. (ಸಾರ್ವಜನಿಕ ಸ್ಥಳಗಳಲ್ಲಿ ವಾಸಿಸುತ್ತಿರುವವರು) | ಆದ್ಯತೆ–1 |
| 2 | ಗುಡಿಸಲುವಾಸಿಗಳು. | ಆದ್ಯತೆ–2 |
| 3 | ತಾತ್ಕಾಲಿಕ ಶೆಡ್‌ಗಳಲ್ಲಿ ವಾಸಿಸುತ್ತಿರುವವರು. | ಆದ್ಯತೆ–3 |
| 4 | ಶಿಥಿಲಗೊಂಡ ಮನೆಗಳಲ್ಲಿ ವಾಸಿಸುತ್ತಿರುವವರು. | ಆದ್ಯತೆ–4 |
| 5 | ಕಚ್ಚಾಮನೆಗಳಲ್ಲಿ ವಾಸಿಸುತ್ತಿರುವವರು. | ಆದ್ಯತೆ–5 |

8. ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮಸಭೆಗಳಿಂದ ಆಯ್ಕೆಯಾದ ಹಾಗೂ ನಗರ ಪ್ರದೇಶಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಂದ ಆಯ್ಕೆಯಾದ ವಸತಿರಹಿತರ ಹಾಗೂ ನಿವೇಶನರಹಿತರ ಅರ್ಹ ಫಲಾನುಭವಿಗಳ ಆಯ್ಕೆ ಪಟ್ಟಿಗಳನ್ನು ಈ ಮೇಲ್ಕಂಡ ಆದ್ಯತೆಗಳ ಮೇರೆಗೆ ಕ್ರಮಾಂಕವಾಗಿ ಅರ್ಹ ಫಲಾನುಭವಿಗಳ ಆಯ್ಕೆ ಪಟ್ಟಿಯನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪ ಸಂಖ್ಯಾತರು ಹಾಗೂ ಸಾಮಾನ್ಯ ವರ್ಗವಾರು ತಯಾರಿಸುವುದು ಹಾಗೂ ಠರಾವು ಹೊರಡಿಸುವುದು.

9. ಸದರಿ ಅರ್ಹ ಫಲಾನುಭವಿಗಳ ಆದ್ಯತಾ ಪಟ್ಟಿಯನ್ನು ಗ್ರಾಮೀಣ ಪ್ರದೇಶಗಳಲ್ಲಿ ಜಾಗೃತ ಸಮಿತಿಗೆ ಹಾಗೂ ನಗರ ಪ್ರದೇಶಗಳಲ್ಲಿ ನಗರ ಆಶ್ರಯ ಸಮಿತಿಗಳಿಗೆ ಸಲ್ಲಿಸುವುದು.

10. ಗ್ರಾಮೀಣ ಪ್ರದೇಶಗಳಲ್ಲಿ ತಾಲ್ಲೂಕು ಪಂಚಾಯ್ತಿಯ ಕಾರ್ಯನಿರ್ವಹಣಾಧಿಕಾರಿಗಳು ಎಲ್ಲಾ ಗ್ರಾಮ ಪಂಚಾಯ್ತಿಗಳಿಂದ ಸ್ವೀಕರಿಸಲಾದ ಅರ್ಹ ಫಲಾನುಭವಿಗಳ ಪಟ್ಟಿಯನ್ನು ಸ್ವೀಕರಿಸುವುದು.

11. ಸರ್ಕಾರದಿಂದ ಗುರಿ ನಿಗದಿ: ಪ್ರತಿ ವರ್ಷ ಆಯವ್ಯಯದಲ್ಲಿ ಸರ್ಕಾರವು ನಿಗದಿಪಡಿಸುವ ಗುರಿಗೆ ಎದುರಾಗಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮವು ತಾಲ್ಲೂಕುವಾರು ಸಾಮಾಜಿಕ ಹಾಗೂ ಆರ್ಥಿಕ ಜಾತಿ ಜನಗಣತಿ–2011 ಸಮೀಕ್ಷೆಯಲ್ಲಿ ಗುರುತಿಸಲಾದ ವಸತಿರಹಿತರ ಸಂಖ್ಯೆಗೆ ಅನುಗುಣವಾಗಿ ಗುರಿಯನ್ನು ನಿಗದಿಪಡಿಸುವುದು.

12. ತಾಲ್ಲೂಕುವಾರು ನಿಗದಿಪಡಿಸಿದ ಭೌತಿಕ ಗುರಿಗೆ ಎದುರಾಗಿ ನಗರ ಪ್ರದೇಶಗಳಲ್ಲಿ "ನಗರ ಆಶ್ರಯ ಸಮಿತಿ" ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ "ಜಾಗೃತ ಸಮಿತಿ" ವಸತಿ ಇಲಾಖೆಯಿಂದ ರಚಿಸಲಾದ ಜಾಗೃತ ಸಮಿತಿ ಆದೇಶ ಸಂಖ್ಯೆ: ವಇ 67 ಹೆಚ್‌ಎಹೆಚ್ 2015 ದಿನಾಂಕ:16.11.2015ರಂತೆ ಕ್ರಮ ಕೈಗೊಳ್ಳುವುದು.

(ಸಮೀರ್ ಮಡಿಮನ್)
ಸರ್ಕಾರದ ಅಧೀನ ಕಾರ್ಯದರ್ಶಿ–2
ವಸತಿ ಇಲಾಖೆ

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಸತಿ ಇಲಾಖೆಯ ಮುಖಾಂತರ ವಿವಿಧ ವಸತಿ ಯೋಜನೆಗಳಡಿ ನಿರ್ಮಿಸಲಾಗುವ ಮನೆಗಳನ್ನು ಹಂಚಿಕೆ ಮಾಡುವ ಸಂಬಂಧ ಫಲಾನುಭವಿಗಳ ಆಯ್ಕೆಗೆ ಜಾಗೃತಿ ಸಮಿತಿಯನ್ನು ಸೃಜಿಸುವ ಬಗ್ಗೆ.

ಓದಲಾಗಿದೆ: 2015–16ನೇ ಆಯವ್ಯಯದ ಭಾಷಣದ ಸಮಾಜ ಕಲ್ಯಾಣ ಇಲಾಖೆಯ ಕಂಡಿಕೆ–188ರಲ್ಲಿ ಘೋಷಿಸಿದಂತೆ.

ಪ್ರಸ್ತಾವನೆ: ಮೇಲೆ ಓದಲಾದ ಕ್ರಮಾಂಕದಲ್ಲಿ 2015–16ನೇ ಸಾಲಿನ ಆಯವ್ಯಯದ ಭಾಷಣದ ಸಮಾಜ ಕಲ್ಯಾಣ ಇಲಾಖೆಯ ಕಂಡಿಕೆ–188ರಲ್ಲಿ ಈ ಕೆಳಕಂಡಂತೆ ಘೋಷಣೆ ಮಾಡಲಾಗಿದೆ.

"ನಿವೇಶನ ಹೊಂದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವಸತಿ ರಹಿತ ಬಡ ಕುಟುಂಬಗಳಿಗೆ – ಗ್ರಾಮೀಣ ಪ್ರದೇಶಗಳಲ್ಲಿ 1,00,000 ಮನೆಗಳನ್ನು ಪ್ರತಿ ಮನೆಯ ಘಟಕ ವೆಚ್ಚ 1.50 ರೂ ಲಕ್ಷಗಳಲ್ಲಿ ಹಾಗೂ ನಗರ ಪ್ರದೇಶಗಳಲ್ಲಿ 50,000ಗಳನ್ನು ಪ್ರತಿ ಮನೆ ಘಟಕ ವೆಚ್ಚ 1.80 ರೂ ಲಕ್ಷಗಳ ವೆಚ್ಚದಲ್ಲಿ ವಸತಿ ಇಲಾಖೆಯ ಮುಖಾಂತರ ನಿರ್ಮಿಸಲಾಗುವುದು. ಮನೆಗಳ ನಿರ್ಮಾಣದ ಪೂರ್ಣ ವೆಚ್ಚವನ್ನು ಸರ್ಕಾರವೇ ಭರಿಸುತ್ತದೆ."

ಅದರಂತೆ 'ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ'ಯನ್ನು ಅನುಷ್ಠಾನಗೊಳಿಸಲು ಫಲಾನುಭವಿಗಳ ಆಯ್ಕೆಯ ಬಗ್ಗೆ ಹಾಗೂ ವಸತಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಗ್ರಾಮೀಣ ವಸತಿ ಯೋಜನೆಗಳಿಗೆ ಅನ್ವಯವಾಗುವಂತೆ ಜಾಗೃತಿ ಸಮಿತಿಯನ್ನು ರಚಿಸಿ, ಆದೇಶ ಹೊರಡಿಸಲು ತೀರ್ಮಾನಿಸಲಾಗಿದ್ದು, ಅದರಂತೆ ಈ ಕೆಳಗಿನ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ವಇ 67 ಹೆಚ್‌ಎಹೆಚ್ 2015, ಬೆಂಗಳೂರು, ದಿನಾಂಕ:16.11.2015**

ಗ್ರಾಮೀಣ ಪ್ರದೇಶಗಳಲ್ಲಿ ವಸತಿ ಯೋಜನೆಗಳ ಅನುಷ್ಠಾನಕ್ಕಾಗಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಈ ಕೆಳಗಿನಂತೆ ಜಾಗೃತ ಸಮಿತಿಯನ್ನು ರಚಿಸಲಾಗಿದೆ.

| | | |
|---|---|---|
| 1. | ವಿಧಾನ ಸಭಾಕ್ಷೇತ್ರವನ್ನು ಪ್ರತಿನಿಧಿಸುವ ವಿಧಾನ ಸಭಾ ಸದಸ್ಯರು | ಅಧ್ಯಕ್ಷರು |
| 2. | ಸಂಬಂಧಿಸಿದ ವಿಧಾನ ಸಭಾಕ್ಷೇತ್ರದಲ್ಲಿ ವಾಸವಾಗಿರುವ ವಿಧಾನ ಪರಿಷತ್ತಿನ ಸದಸ್ಯರು | ಉಪಾಧ್ಯಕ್ಷರು |
| 3. | ಸರ್ಕಾರದಿಂದ ನಾಮ ನಿರ್ದೇಶಿತ ಒಬ್ಬ ಜಿಲ್ಲಾ ಪಂಚಾಯತ್ ಸದಸ್ಯರು | ಸದಸ್ಯರು |
| 4. | ಸರ್ಕಾರದಿಂದ ನಾಮ ನಿರ್ದೇಶಿತ ಒಬ್ಬ ತಾಲ್ಲೂಕು ಪಂಚಾಯತ್ ಸದಸ್ಯರು | ಸದಸ್ಯರು |
| 5 | ಸರ್ಕಾರದಿಂದ ನಾಮ ನಿರ್ದೇಶಿತ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪ ಸಂಖ್ಯಾತ, ಹಿಂದುಳಿದ ವರ್ಗ ಹಾಗೂ ಸಾಮಾನ್ಯ ವರ್ಗದ ಸದಸ್ಯರು. ಸದರಿ ಐದು ನಾಮ ನಿರ್ದೇಶಿತ ಸದಸ್ಯರಲ್ಲಿ ಒಬ್ಬರು ಮಹಿಳೆಯಾಗಿರತಕ್ಕದ್ದು. | ಐದು ನಾಮ ನಿರ್ದೇಶಿತ ಸದಸ್ಯರು |
| 6. | ತಾಲ್ಲೂಕು ಮಟ್ಟದ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ / ಪರಿಶಿಷ್ಟ ಪಂಗಡದ ಕಲ್ಯಾಣಾಧಿಕಾರಿ | ಸದಸ್ಯರು |
| 7. | ಸಂಬಂಧ ಪಟ್ಟ ತಾಲ್ಲೂಕ ತಹಶೀಲ್ದಾರ್ | ಸದಸ್ಯರು |
| 8. | ಸದಸ್ಯ ಕಾರ್ಯದರ್ಶಿಯ ತಾಲ್ಲೂಕನ್ನು ಹೊರತುಪಡಿಸಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಇತರ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ | ಸದಸ್ಯರು |
| 9. | ವಿಧಾನ ಸಭಾ ಕ್ಷೇತ್ರದ ಅತಿ ಹೆಚ್ಚು ಭಾಗವನ್ನು ಪ್ರತಿನಿಧಿಸುವ ತಾಲ್ಲೂಕಿನ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ | ಸದಸ್ಯ ಕಾರ್ಯದರ್ಶಿಗಳು |

ಜಾಗೃತ ಸಮಿತಿಯ ಜವಾಬ್ದಾರಿಗಳು ಈ ಕೆಳಗಿನಂತಿದೆ:

(i) ಗ್ರಾಮ ಸಭೆಗಳಲ್ಲಿ ಸಾಮಾಜಿಕ ಹಾಗೂ ಆರ್ಥಿಕ ಜಾತಿ ಜನಗಣತಿ–2011ರ ಮಾಹಿತಿಯನ್ನಾಧರಿಸಿ, ತಯಾರಿಸಿ ಅನುಮೋದಿಸಲ್ಪಟ್ಟ ಅರ್ಹ ಫಲಾನುಭವಿಗಳ ಆಯ್ಕೆ ಪಟ್ಟಿ, ಸಂಬಂಧಪಟ್ಟ ದಾಖಲಾತಿ ಹಾಗೂ ವಿಡಿಯೋ ಚಿತ್ರೀಕರಣ ಪರಿಶೀಲಿಸಿ ಅನುಮೋದಿಸುವುದು.

(ii) ಒಂದು ವೇಳೆ ಗ್ರಾಮ ಸಭೆಯ ಆದ್ಯತಾ ಪಟ್ಟಿಯಲ್ಲಿ ಅರ್ಹರಿರುವವರ ಹೆಸರು ಅರ್ಹತೆಗನುಗುಣವಾಗಿ ಮೇಲಿನ ಕ್ರಮಾಂಕದಲ್ಲಿದ್ದು, ಗ್ರಾಮ ಸಭೆ ಆಯ್ಕೆ ಪಟ್ಟಿಯಲ್ಲಿ ಬಿಟ್ಟಿದ್ದರೆ ಅಂತಹವರ ಅರ್ಜಿ ಪರಿಶೀಲಿಸಿ ಪಟ್ಟಿಯಲ್ಲಿ ಮುಂದಿನ ಹೆಸರೆಂದು ಪರಿಗಣಿಸುವುದು.

(iii) ಒಂದು ವೇಳೆ ಗ್ರಾಮಸಭೆ ಅನುಮೋದಿಸಿದ ಪಟ್ಟಿಯಲ್ಲಿ ಅನರ್ಹರಿರುವ ಹೆಸರು ಸೇರಿದ್ದರೆ ಅದನ್ನು ಕಾರಣ ದಾಖಲಿಸಿ ರದ್ದುಪಡಿಸಿ ಯಾವ ಪ್ರವರ್ಗ/ವರ್ಗದಿಂದ ಹೆಸರು ರದ್ದುಗೊಂಡಿದೆಯೋ ಪಟ್ಟಿಯಲ್ಲಿನ ಅದೇ ಪ್ರವರ್ಗ/ ವರ್ಗದಿಂದ ರದ್ದುಪಡಿಸಿದ ಮುಂದಿನ ಹೆಸರನ್ನು ಸೇರಿಸುವುದು.

(iv) ಲಿಖಿತ ದೂರುಗಳು ಏನಾದರೂ ಬಂದಲ್ಲಿ, ಅವುಗಳನ್ನು ಸ್ವೀಕರಿಸಿ ಅವುಗಳ ಬಗ್ಗೆ ತನಿಖೆ ಮಾಡಿ ಸಂಬಂಧಪಟ್ಟವರ ಮೇಲೆ ಕ್ರಮ ತೆಗೆದುಕೊಳ್ಳುವಂತೆ ಸಂಬಂಧಪಟ್ಟವರಿಗೆ ಶಿಫಾರಸ್ಸು ಮಾಡುವುದು.

(v) ಸರ್ಕಾರದಿಂದ ತಾಲ್ಲೂಕುವಾರು ನಿಗದಿಪಡಿಸಿದ ಗುರಿಗೆ ಎದುರಾಗಿ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ/ಅಲ್ಪಸಂಖ್ಯಾತ/ಸಾಮಾನ್ಯ ಫಲಾನುಭವಿಗಳು ಲಭ್ಯವಿಲ್ಲದೆ ಇದ್ದಲ್ಲಿ ಆ ಪಂಚಾಯತಿಗೆ ನೀಡಲಾದ ಗುರಿಯನ್ನು ಅದೇ ತಾಲ್ಲೂಕಿನ ವ್ಯಾಪ್ತಿಯಡಿ ಬರುವ ಇತರೆ ಗ್ರಾಮ ಪಂಚಾಯತಿಗಳಿಗೆ ಗುರಿಯನ್ನು ವರ್ಗಾಯಿಸಲು ಸಮಿತಿ ನಿರ್ಣಯ ಮಾಡುವುದು. ಒಂದು ವೇಳೆ ಸದರಿ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅರ್ಹ ಫಲಾನುಭವಿಗಳು ಲಭ್ಯವಿಲ್ಲದೆ ಇದ್ದಲ್ಲಿ ಅಂತಹ ಗುರಿಯನ್ನು ನಿಗಮಕ್ಕೆ ಅಧ್ಯರ್ಪಣೆ ಮಾಡುವುದು.

(vi) ನಿವೇಶನರಹಿತರಿಗೆ ನಿವೇಶನಸಹಿತ ವಸತಿ ಸೌಕರ್ಯವನ್ನು ಒದಗಿಸಲು ಸ್ಥಳೀಯವಾಗಿ ಲಭ್ಯವಿರುವ ಸರಕಾರಿ ಜಮೀನನ್ನು ಜಿಲ್ಲಾಧಿಕಾರಿಗಳ ಮೂಲಕ ಮಂಜೂರಾತಿ ಮಾಡಲು ಶಿಫಾರಸ್ಸು ಮಾಡುವುದು ಅಥವಾ ಸರಕಾರಿ ಜಮೀನು ಲಭ್ಯವಿಲ್ಲದಿದ್ದಲ್ಲಿ ಸೂಕ್ತ ಖಾಸಗಿ ಜಮೀನು ಖರೀದಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಿಲ್ಲಾ ಸಮಿತಿಗೆ ಪ್ರಸ್ತಾವನೆ ಸಲ್ಲಿಸಲು ಹಾಗೂ ಸಭೆ ಕರೆಯಲು ಸದಸ್ಯ ಕಾರ್ಯದರ್ಶಿಗೆ ಸೂಚಿಸುವುದು.

(vii) ವಸತಿ ಯೋಜನೆಗಳಡಿ ಆಯ್ಕೆಯಾಗುವ ಫಲಾನುಭವಿಗಳಿಗೆ ಮನೆ ನಿರ್ಮಾಣ ಕುರಿತು ಜಾಗೃತಿ ಮೂಡಿಸಲು ಸಭೆ/ಕಾರ್ಯಾಗಾರಗಳನ್ನು ಏರ್ಪಡಿಸುವಿಕೆ.

(viii) ವಸತಿ ಯೋಜನೆಗಳಡಿ ಪ್ರಗತಿಯು ಕುಂಠಿತಗೊಂಡಿದ್ದಲ್ಲಿ ಅಥವಾ ಸ್ಥಗಿತಗೊಂಡಿದ್ದಲ್ಲಿ ಸೂಕ್ತ ಕ್ರಮ ವಹಿಸುವಂತೆ ಸದಸ್ಯ ಕಾರ್ಯದರ್ಶಿಗೆ ಸೂಕ್ತ ನಿರ್ದೇಶನ ನೀಡುವುದು.

(ix) ನಿಯಮಾವಳಿಗಳು ಮತ್ತು ಮಾರ್ಗಸೂಚಿಗಳನ್ವಯ ಕಾರ್ಯಕ್ರಮ ಅನುಷ್ಠಾನ ಜಾರಿಯಾಗಿದೆಯೋ ಇಲ್ಲವೋ ಎಂಬ ಬಗ್ಗೆ ಪರಿಶೀಲಿಸುವುದು. ಫಲಾನುಭವಿಗಳಿಗೆ ಸರಿಯಾಗಿ ಪ್ರಯೋಜನಗಳು ತಲುಪಿದ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು ಮತ್ತು ಪ್ರತಿ ತ್ರೈಮಾಸಿಕ್ಕೊಮ್ಮೆ ಪ್ರಗತಿ ಪರಿಶೀಲನಾ ಸಭೆ ನಡೆಸುವುದು.

ತಾಲ್ಲೂಕುವಾರು ನಿಗದಿಪಡಿಸಿದ ಭೌತಿಕ ಗುರಿಗೆ ಎದುರಾಗಿ ನಗರ ಪ್ರದೇಶಗಳಲ್ಲಿ "ನಗರ ಆಶ್ರಯ ಸಮಿತಿ" ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ (ವಸತಿ ಇಲಾಖೆಯಿಂದ ರಚಿಸಲಾದ) "ಜಾಗೃತ ಸಮಿತಿ" ಸ್ಥಳೀಯ ಸಂಸ್ಥೆಗಳಿಂದ ತಯಾರಿಸಲಾದ ಅರ್ಹ ಫಲಾನುಭವಿಗಳ ಆಯ್ಕೆ ಪಟ್ಟಿಯಿಂದ ಕ್ರಮಾಂಕವಾಗಿ ಸ್ಥಳೀಯ ಸಂಸ್ಥೆಗಳಲ್ಲಿರುವ ಅರ್ಹ ಫಲಾನುಭವಿಗಳ ಪ್ರಮಾಣಕ್ಕೆ ಅನುಗುಣವಾಗಿ (Proportionate) ಮೀಸಲಾತಿ, ಒಳಮೀಸಲಾತಿ ಹಾಗೂ ಆದ್ಯತೆಯ ಮಾನದಂಡಗಳನ್ನು ಅನುಸರಿಸಿ ಫಲಾನುಭವಿಗಳ ಆಯ್ಕೆ ಪಟ್ಟಿಯನ್ನು ಅನುಮೋದಿಸುವುದು.

(i) ಸರ್ಕಾರದ ಗುರಿಗೆ ಎದುರಾಗಿ ಅರ್ಹ ಫಲಾನುಭವಿಗಳು ಆಯ್ಕೆಯಾದ ನಂತರ ಕಾಮಗಾರಿ ಆದೇಶ ನೀಡುವುದು, ಫಲಾನುಭವಿಗಳಿಂದ ಮನೆ ನಿರ್ಮಾಣ, ದಾಖಲೀಕರಣ, ಬ್ಯಾಂಕ್ ಖಾತೆ ತೆರೆಯುವುದು, ಅನುದಾನ ಬಿಡುಗಡೆ ಇತ್ಯಾದಿ ಎಲ್ಲಾ ಪ್ರಕ್ರಿಯೆಗಳನ್ನು ವಸತಿ ಇಲಾಖೆಯಿಂದ ಹೊರಡಿಸಲಾದ 'ಮನೆ' ಸಮಗ್ರ ಮಾರ್ಗಸೂಚಿಗಳಲ್ಲಿ ನೀಡಿರುವ ಸರ್ಕಾರದ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.

(ii) ಮಾರ್ಗಸೂಚಿಗಳಲ್ಲಿ ಕಾಲ ಕಾಲಕ್ಕೆ ಬೇಕಾಗುವ ಬದಲಾವಣೆಗಳನ್ನು ಅಳವಡಿಸಿಕೊಳ್ಳಲು ವಸತಿ ಇಲಾಖೆಯಿಂದ ಕ್ರಮ ಕೈ ಗೊಳ್ಳಲಾಗುವುದು.

(iii) ಪ್ರಸ್ತುತ ವರ್ಷದಲ್ಲಿ ಡಾ॥ ಬಿ.ಆರ್.ಅಂಬೇಡ್ಕರ್ ನಿವಾಸ ಯೋಜನೆಯನ್ನು ಹೊರತುಪಡಿಸಿ ಉಳಿದ ರಾಜ್ಯ ಸರ್ಕಾರದ ವಸತಿ ಯೋಜನೆಗಳು ಈಗಾಗಲೇ ಅನುಷ್ಠಾನ ಹಂತದಲ್ಲಿರುವುದರಿಂದ ಮೇಲೆ ಶಿಫಾರಸ್ಸು ಮಾಡಿರುವ ಪದ್ಧತಿಯು ಪ್ರಸ್ತುತ ವರ್ಷದಲ್ಲಿ ಕೇವಲ ಡಾ॥ ಬಿ.ಆರ್. ಅಂಬೇಡ್ಕರ್ ನಿವಾಸ ಯೋಜನೆಗೆ ಅನ್ವಯಿಸುವುದು. ಉಳಿದ ರಾಜ್ಯ ಸರ್ಕಾರದ ವಸತಿ ಯೋಜನೆಗಳಿಗೆ ಮುಂದಿನ ಸಾಲಿನಿಂದ ಅನ್ವಯಿಸುವುದು.

ಮೇಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಸಮೀರ ಮಡಿಮನ್)
ಸರ್ಕಾರದ ಅಧೀನ ಕಾರ್ಯದರ್ಶಿ
ವಸತಿ ಇಲಾಖೆ

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
5. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ.
6. ಸರ್ಕಾರದ ಕಾರ್ಯದರ್ಶಿ(ಪುರಸಭೆಗಳು ಮತ್ತು ಪೌರಾಡಳಿತ) ನಗರಾಭಿವೃದ್ಧಿ ಇಲಾಖೆ. ವಿಕಾಸ ಸೌಧ.
7. ಸರ್ಕಾರದ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ವಿಶೇಷ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ.
9. ಸರ್ಕಾರದ ಅಪರ ಕಾರ್ಯದರ್ಶಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ.
10. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ.
11. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ, ಬೆಂಗಳೂರು.
12. ಸಮಾಲೋಚಕರು, ಸಮಾಜ ಕಲ್ಯಾಣ ಇಲಾಖೆ.
13. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ
14. ಎಲ್ಲಾ ಜಿಲ್ಲಾಧಿಕಾರಿಗಳು.

7

15. ಎಲ್ಲಾ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
16. ಎಲ್ಲಾ ಉಪ ವಿಭಾಗಾಧಿಕಾರಿಗಳು.
17. ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು.
18. ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್‌ರವರು,
19. ಎಲ್ಲಾ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯ್ತಿ,
20. ಎಲ್ಲಾ ನಗರಸಭೆ ಆಯುಕ್ತರು.
21. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಕಾನೂನು ನ್ಯಾಯ, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
4. ಮಾನ್ಯ ವಸತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.
6. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ. ಬೆಂಗಳೂರು.
7. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ) ಪ್ರಕರಣ ಸಂಖ್ಯೆ: ಸಿ:419/2015, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕ, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು
11. ಶಾಖಾ ರಕ್ಷಾ ಕಡತಕ್ಕೆ.